ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

639(804) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ;

(ಇ) ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪದ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಪಶು ಆಸ್ಪತ್ರೆಗಳಲ್ಲಿ ಔಷಧಿಗಳು ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?